ಅ) ಹುಣಸೂರು ತಾಲ್ಲೂಕಿನಲ್ಲಿ ಜಿಲ್ಲಾ ಪಂಚಾಯತ್ ವ್ಯಾಪ್ತಿಯ 700 ಕಿ.ಮೀ. ಉದ್ದದ ರಸ್ತೆಗಳಿಗೆ 2002-03 ರಲ್ಲಿ ವಾರ್ಷಿಕ ನಿರ್ವಹಣೆಗಾಗಿ ಇಟ್ಟಿದ್ದ 15 ಲಕ್ಷ ರೂಪಾಯಿಗಳನ್ನು ಖರ್ಚುಮಾಡದೆ ಬೇರೆ ಉದ್ದೇಶಕ್ಕೆ ವರ್ಗಾಯಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ತುರ್ತು ರಿಪೇರಿ ಹಾಗೂ ವಾರ್ಷಿಕ ನಿರ್ವಹಣೆ ಇಲ್ಲದೆ ಹಾಳಾಗುತ್ತಿರುವ ರಸ್ತೆಯನ್ನು ಸರಿಪಡಿಸಲು ಸರ್ಕಾರ ಕೈಗೊಳ್ಳಲಿರುವ ತುರ್ತು ಕ್ರಮವೇನು?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು):

ಅ) ಇಲ್ಲ. ಜಿಲ್ಲಾ ಪಂಚಾಯತ್‌ನಿಂದ ಅನುಮೋದನೆಯಾದ ಕ್ರಿಯಾ ಯೋಜನೆಯಂತೆ ರಸ್ತೆ ಅಭಿವೃದ್ಧಿ ಮತ್ತು ದುರಸ್ತಿ ಕಾಮಗಾರಿಗಳಿಗೆ ಖರ್ಚು ಮಾಡಲಾಗಿದೆ.

ಆ) ತುರ್ತು ರಿಪೇರಿ ಮತ್ತು ನಿರ್ವಹಣೆ ಅಗತ್ಯವಿರುವ ರಸ್ತೆಗಳನ್ನು ಸರಿಪಡಿಸಲು ರೂ. 36.56 ಲಕ್ಷಗಳ ಕ್ರಿಯಾ ಯೋಜನೆಗೆ ಜಿಲ್ಲಾ ಪಂಚಾಯತ್ ಅನುಮೋದನೆ ನೀಡಿರುತ್ತದೆ. ಇದರಂತೆ ರಸ್ತೆ ದುರಸ್ತಿ ಕೈಗೊಂಡಿದೆ.

ರಾಜ್ಯದಲ್ಲಿ ಗ್ರಂಥಾಲಯಗಳ ಸ್ಥಾಪನೆ

2049(2174) ಶ್ರೀ ಪಾಟೀಲ್ ಜೆ.ಟಿ. (ಬೀಳಗಿ) : ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಗ್ರಂಥಾಲಯ ಸೌಲಭ್ಯ ಒದಗಿಸಿದ ಪಂಚಾಯತ್‌ಗಳ ಸಂಖ್ಯೆ ಎಷ್ಟು;

ಆ) ಇನ್ನು ಎಷ್ಟು ವರ್ಷಗಳಲ್ಲಿ ಗ್ರಂಥಾಲಯಗಳನ್ನು ಸ್ಥಾಪನೆ ಮಾಡಲಾಗುವುದು;

ಇ) ಗ್ರಂಥಾಲಯಗಳ ಸ್ಥಾಪನೆಗೆ ಸರ್ಕಾರ ವಿಶೇಷವಾದ ಕಾರ್ಯಕ್ರಮವನ್ನೇನಾದರೂ ಹಮ್ಮಿಕೊಂಡಿದೆಯೇ?

ಶ್ರೀ ಬಾಬುರಾವ್ ಚವ್ಹಾಣ್ (ವಯಸ್ಕರ ಶಿಕ್ಷಣ, ಗ್ರಂಥಾಲಯಗಳು ಮತ್ತು ಮುದ್ರಣ ಹಾಗೂ ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) 3251 ಪಂಚಾಯ್ತಿಗಳು

ಆ) ಹಣಕಾಸಿನ ಲಭ್ಯತೆ ಮೇರೆಗೆ ಹಂತ ಹಂತವಾಗಿ ಸ್ಥಾಪನೆ ಮಾಡಲಾಗುವುದು

ಇ) ಇಲ್ಲ

ಬಾಗಲಕೋಟೆ ಜಿಲ್ಲೆಯಲ್ಲಿ ರಾಜೀವಗಾಂಧಿ ಗ್ರಾಮೀಣ ಕುಡಿಯುವ ನೀರಿನ ಯೋಜನೆ

2050(2175) ಶ್ರೀ ಪಾಟೀಲ್ ಜೆ.ಟಿ (ಬೀಳಗಿ) : ಮಾನ್ಯ ಗ್ರಾಮೀಣ ನೀರು ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜೀವ್ ಗಾಂಧಿ ಗ್ರಾಮೀಣ ಕುಡಿಯುವ ನೀರಿನ ಯೋಜನೆಯಲ್ಲಿ ಗ್ರಾಮಸ್ಥರು ತಮ್ಮ ಪಾಲಿನ ವಂತಿಗೆ ನೀಡಲು ಮುಂದೆ ಬರದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಇದರಿಂದ ಯೋಜನೆ ವಿಫಲವಾಗುವುದಿಲ್ಲವೇ: ಗ್ರಾಮಸ್ಥರು ವಂತಿಗೆಯ ಬದಲಿಗೆ ಪರ್ಯಾಯ ಯೋಜನೆಯನ್ನೇನಾದರೂ ಸರಕಾರ ಮಾಡಿದೆಯೇ;

ಇ) ಕುಡಿಯುವ ನೀರಿನ ಸಮಸ್ಯೆಯನ್ನು ಸರಕಾರ ಸಂಪೂರ್ಣವಾಗಿ ಎಷ್ಟು ವರ್ಷಗಳಲ್ಲಿ ಬಗೆಹರಿಸುವುದು ಹಾಗೂ ಇದಕ್ಕೆ ನಿಗದಿತ ಕಾರ್ಯಕ್ರಮವನ್ನೇನಾದರೂ ಹಾಕಿಕೊಂಡಿದೆಯೇ: (ವಿವರ ಒದಗಿಸುವುದು);

ಈ) ಬಾಗಲಕೋಟೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಹಳ್ಳಿಗಳ ಸಂಖ್ಯೆ ಎಷ್ಟು; ನೀರಿನಲ್ಲಿ ಫ್ಲೋರೈಡ್ ಹೊಂದಿರುವ ಹಳ್ಳಿಗಳ ಸಂಖ್ಯೆ ಎಷ್ಟು;

ಉ) ನೀರಿನಲ್ಲಿ ಫ್ಲೋರೈಡ್ ಹೊಂದಿರುವ ಹಳ್ಳಿಗಳ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಹಾಕಿಕೊಂಡ ಕಾರ್ಯಕ್ರಮಗಳೇನು?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ಸಚಿವರು):

ಅ) ಸಬ್‌ಮಿಷನ್ ಯೋಜನೆಗಳ ಅನುಷ್ಠಾನಕ್ಕಾಗಿ ಸಮುದಾಯ ವಂತಿಗೆ ಸಂಗ್ರಹವಾಗುವಲ್ಲಿ ವಿಳಂಬವಾಗುತ್ತಿರುವ ಅಂಶ ಸರ್ಕಾರದ ಗಮನಕ್ಕೆ ಬಂದಿದೆ.

ಆ) ಸಬ್‌ಮಿಷನ್ ಯೋಜನೆಗಳ ಅನುಷ್ಠಾನಕ್ಕಾಗಿ ವಾರ್ಷಿಕ ಎಆರ್‌ಡಬ್ಲ್ಯೂಎಸ್‌ಪಿ ಅನುದಾನದಲ್ಲಿ ಶೇ 20 ರಷ್ಟು ಅನುದಾನವನ್ನು ಮಾತ್ರ ಬಳಸಿಕೊಳ್ಳಲು ಅವಕಾಶವಿರುವುದರಿಂದ, ಯೋಜನೆಗಳನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲು ಉದ್ದೇಶಿಸಿದೆ. ಹೀಗಾಗಿ ಸಮುದಾಯ ವಂತಿಗೆಯನ್ನು ಗ್ರಾಮಸ್ಥರಿಗೆ ತೊಂದರೆಯಾಗದಂತೆ ಪ್ರತಿ ಮನೆಗೆ ತಲಾ ರೂ. 1000/- ಮಿತಿಗೆ ಒಳಪಟ್ಟು ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ರಾಜ್ಯದ ಎಲ್ಲಾ ಗ್ರಾಮೀಣ ಜನವಸತಿಗಳಿಗೆ ದಿನಂಪ್ರತಿ ತಲಾ 55 ಲೀಟರ್ ಪ್ರಮಾಣದಲ್ಲಿ ಕುಡಿಯುವ ನೀರನ್ನು 2007ನೇ ಇಸವಿಯ ವೇಳೆಗೆ ಒದಗಿಸಲು ಉದ್ದೇಶಿಸಿದ್ದು, ಗ್ರಾಮೀಣ ನೀರು ಸರಬರಾಜು ಯೋಜನೆಗಳನ್ನು ಸಾಮಾನ್ಯ ಕಾರ್ಯಕ್ರಮ ಹಾಗೂ ವಿದೇಶೀ ನೆರವಿನ ಕಾರ್ಯಕ್ರಮಗಳಡಿ ಅನುಷ್ಠಾನಗೊಳಿಸಲಾಗುತ್ತಿದೆ.

ಈ) ಬಾಗಲಕೋಟೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಇರುವ ಗ್ರಾಮಗಳ ಸಂಖ್ಯೆ 131 ಮತ್ತು ಕುಡಿಯುವ ನೀರಿನಲ್ಲಿ ಅಧಿಕ ಫ್ಲೋರೈಡಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳ ಸಂಖ್ಯೆ 135.

ಉ) ಕುಡಿಯುವ ನೀರಿನಲ್ಲಿ ಅಧಿಕ ಫ್ಲೋರೈಡಿನ ಸಮಸ್ಯೆ ಎದುರಿಸುತ್ತಿರುವ ಗ್ರಾಮಗಳಿಗೆ ಸುರಕ್ಷಿತ ಕುಡಿಯುವ ನೀರಿನ ಪೂರೈಕೆಗಾಗಿ ಯೋಜನೆಗಳನ್ನು ಸಬ್‌ಮಿಷನ್ ಕಾರ್ಯಕ್ರಮದಡಿ ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುತ್ತಿದೆ.

ಹಾಸನ ಜಿಲ್ಲೆಯಲ್ಲಿನ ಸ್ಥಳೀಯ ಸಂಸ್ಥೆಗಳಿಗೆ ಬಿಡುಗಡೆಯಾಗಿರುವ ಅನುದಾನ ಹಾಗೂ ಸ್ವಾಂಪ್ ಡ್ಯೂಟಿ ಹಣದ ಬಿಡುಗಡೆ ಬಗ್ಗೆ

2051(1619) ಶ್ರೀ ಪುಟ್ಟರಂಗನಾಥ್.ಎಸ್.ಹೆಚ್. (ಬೇಲೂರು) : ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೇ?

ಅ) ಹಾಸನ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ನಗರಸಭೆ, ಪಟ್ಟಣ ಪಂಚಾಯತಿಗಳಿಗೆ ಎಸ್.ಎಫ್.ಸಿ. ಅನುದಾನ ಹಾಗೂ ಸ್ವಾಂಪ್‌ಡ್ಯೂಟಿ ಹಣ ಎಷ್ಟು ಬಿಡುಗಡೆ ಮಾಡಲಾಗಿದೆ? (ತಾಲ್ಲೂಕುವಾರು ವಿವರ ತಿಳಿಸುವುದು);

ಶ್ರೀ ಎಸ್. ಕುಮಾರ ಬಂಗಾರಪ್ಪ (ಪೌರಾಡಳಿತ ರಾಜ್ಯ ಸಚಿವರು):